ಖಾಸಗಿ ಪ್ರಾಥಮಿಕ ಶಾಲೆಗಳಿಗೆ ಅಕ್ಷಯ ಯೋಜನೆಯ ಪ್ರಯೋಜನವನ್ನು ವಿಸ್ತರಿಸುವ ಬಗ್ಗೆ

1152: ಶ್ರೀ ಗುರುಪಾದಪ್ಪ ನಾಗ್ಮಾರ್‌ಪಲ್ಲಿ (ಔರಾದ್):–

ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಸರ್ಕಾರವು ಅಕ್ಷಯ ಯೋಜನೆಯನ್ನು ಪ್ರಾರಂಭಿಸಿರುವ ಉದ್ದೇಶವೇನು;

ಆ) ಈ ಯೋಜನೆಯ ಸೌಲಭ್ಯವನ್ನು ಖಾಸಗಿ ಪ್ರಾಥಮಿಕ ಶಾಲೆಗಳಿಗೆ ನೀಡಲಾಗುತ್ತಿದೆಯೇ;

ಇ) ಹಾಗಿಲ್ಲದಿದ್ದಲ್ಲಿ, ಈ ಯೋಜನೆಯ ಉದ್ದೇಶ ಬರೀ ಸರ್ಕಾರಿ ಶಾಲೆಗಳಿಗೆ ಮಾತ್ರ ಅನುಕೂಲವಾಗುವ ಸಲುವಾಗಿ ಮಾಡಲಾಗಿದೆಯೇ;

ಈ) ಯೋಜನೆಯ ಉದ್ದೇಶ ಸಫಲವಾಗಲು ಹಾಗೂ ಸರ್ಕಾರಿ ಮತ್ತು ಖಾಸಗೀ ಪ್ರಾಥಮಿಕ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಸಲುವಾಗಿ ಈ ಯೋಜನೆಯನ್ನು ಖಾಸಗಿ ಪ್ರಾಥಮಿಕ ಶಾಲೆಗಳಿಗೂ ವಿಸ್ತರಿಸುವ ಬಗ್ಗೆ ಸರ್ಕಾರವು ಪರಿಶೀಲಿಸುತ್ತದೆಯೇ ?

ಡಾ. ಹೆಚ್.ಡಿ. ಲಮಾಣಿ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು):–

ಅ) ಸರ್ಕಾರಿ, ನಗರಪಾಲಿಕೆ ಮತ್ತು ಸ್ಥಳೀಯ ಸಂಸ್ಥೆಗಳಲ್ಲಿ 1ರಿಂದ 4 ನೇ ತರಗತಿಯ ವಿದ್ಯಾರ್ಥಿಗಳ ಹಾಜರಾತಿಯನ್ನು ಹೆಚ್ಚಿಸಲು ಶಾಲೆಗಳಲ್ಲಿ ಮಧ್ಯೆ ಬಿಟ್ಟು ಹೋಗುವವರ ಸಂಖ್ಯೆಯನ್ನು ಕಡಿಮೆ ಮಾಡುವ ಮುಖ್ಯ ಉದ್ದೇಶದಿಂದ ಈ ಯೋಜನೆಯನ್ನು ಪ್ರಾರಂಭಿಸಲಾಗಿದೆ.

ಆ) ನೀಡಲಾಗುತ್ತಿಲ್ಲ.

ಇ) ಈ ಯೋಜನೆ ಸರ್ಕಾರಿ, ನಗರಪಾಲಿಕೆ ಮತ್ತು ಸ್ಥಳೀಯ ಸಂಸ್ಥೆಗಳ ಶಾಲೆಗಳಿಗೆ ಮಾತ್ರ ಅನ್ವಯಿಸುತ್ತದೆ.

ಈ) ಈ ದಿಶೆಯಲ್ಲಿ ಸರ್ಕಾರ ಯೋಚಿಸುತ್ತಿಲ್ಲ.

ಬೀದರ್ ಜಿಲ್ಲೆಯಲ್ಲಿರುವ ಖಾಸಗೀ ಶಿಕ್ಷಣ ಸಂಸ್ಥೆಗಳಿಗೆ ಅನುದಾನ ಬಿಡುಗಡೆ ಮಾಡದೆ ಇರುವುದು

1342 (1153): ಶ್ರೀ ಗುರುಪಾದಪ್ಪ ನಾಗ್ಮಾರಪಲ್ಲಿ (ಔರಾದ್):–

ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೀದರ್ ಜಿಲ್ಲೆಯಲ್ಲಿರುವ ಖಾಸಗಿ ಸಂಸ್ಥೆಗಳಿಂದ ನಡೆಸಲ್ಪಡುತ್ತಿರುವ ಪ್ರಾಥಮಿಕ ಮತ್ತ ಪ್ರೌಢಶಾಲೆಗಳು ಯಾವುವು; (ತಾಲ್ಲೂಕುವಾರು ವಿವರಗಳನ್ನು ನೀಡುವುದು);

ಆ) ಇವುಗಳ ಪೈಕಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಸಂಸ್ಥೆಗಳಿಂದ ನಡೆಸಲ್ಪಡುತ್ತಿರುವ ಶಿಕ್ಷಣ ಸಂಸ್ಥೆಗಳು ಯಾವುವು; (ತಾಲ್ಲೂಕುವಾರು ವಿವರಗಳನ್ನು ನೀಡುವುದು)